ಕರ್ನಾಟಕ ಸರ್ಕಾರ (ಸಿ.ಆರ್.ಪಿ. 67)

| |
|---|
| ಹೇಳಿಕೆ ಹಾಳೆ<br>(ಆರ್.ಪಿ. ಸಂಖ್ಯೆ 57)<br>ನಮೂನೆ ಸಂಖ್ಯೆ 4<br>(ಸಿವಿಲ್) |

ದಿವಾಣಿ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾ.ದಂ. ಹಳಿಯಾಳ
ಇವರ ನ್ಯಾಯಾಲಯದಲ್ಲಿ.

ಸಿ.ಸಿ. ನಂ.: 1332/2022

..........................................................................

CW 10
PW 08

| | | |
|---|---|---|
| ಹೆಸರು | : | ಪರೆಪ್ಪಾ |
| ತಂದೆಯ ಹೆಸರು | : | ಸುಕ್ರೆಪ್ಪಾ ಕಡಗದ |
| ವಯಸ್ಸು | : | 38 ವರ್ಷ |
| ಉದ್ಯೋಗ | : | ರೈತಾಪಿ |
| ವಾಸಸ್ಥಳ | : | ಶಿರೂರು, ನವಲಗುಂದ ತಾಲೂಕು |

ದಿನಾಂಕ 15-10-2025 ರಂದು ಸತ್ಯಪ್ರತಿಜ್ಞೆ ಮೇಲೆ ಪ್ರಮಾಣವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ** : ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ :

ಚಾಸಾ 1 ರಿಂದ 8 ಪರಿಚಯ. ಚಾಸಾ 9 ನನ್ನ ಅಕ್ಕ. ಚಾಸಾ 11 ರವರ ಪರಿಚಯ ಇಲ್ಲ. ಮೃತ ಸಿದ್ದಪ್ಪಾ ಚೆನ್ನಪ್ಪಾ ಸುಂಕದ ನನ್ನ ಅಕ್ಕನ ಗಂಡನಾಗಬೇಕು. ಇವರು ಸುಮಾರು 3 ವರ್ಷಗಳ ಹಿಂದೆ ಹಳಿಯಾಳದಲ್ಲಿ ಅಪಘಾತ ಆಗಿ ಮರಣ ಹೊಂದಿದರು. ಅಪಘಾತ ಹೇಗೆ ಆಯಿತು ಎಂದು ನನಗೆ ಗೊತ್ತಿಲ್ಲ.ಚಾಸಾ 9 ನನಗೆ ಅಪಘಾತವಾದ ಬಗ್ಗೆ ಹೇಳಿದ ನಂತರ ನಾನು, ಚಾಸಾ 9 ಮತ್ತು ನನ್ನ ತಾಯಿ ಹಳಿಯಾಳದ ಸರ್ಕಾರಿ ಆಸ್ಪತ್ರೆಗೆ ಬಂದು ನೋಡಿದಾಗ ಅವರ ತಲೆಗೆ ತೀವ್ರ ತರಹದ ಗಾಯವಾಗಿ ಮರಣ ಹೊಂದಿದ್ದರು. ಈ ವಿಚಾರವಾಗಿ ಪೋಲಿಸರು ನನ್ನನ್ನು ವಿಚಾರಣೆ ಮಾಡಿಲ್ಲ.

(ಈ ಹಂತದಲ್ಲಿ ಸಸಅ ರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಅಂತ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದ್ದರಿಂದ ಸಾಕ್ಷ್ಯ ಹಾಗೂ ಪ್ರಕರಣದ ಇತರ ಅಂಶಗಳನ್ನು ಗಮನಿಸಿ ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು ).

**ಪಾಟೀ ಸವಾಲು : ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರಿಂದ.**

ದಿನಾಂಕ 18-12-2021 ರಂದು ನೀವು ಪೋಲಿಸರಿಗೆ ಹೇಳಿಕೆ ನೀಡಿದ್ದು ಅದರಲ್ಲಿ ನಾನು ಮೇಲ್ಕಂಡ ವಿಳಾಸದಲ್ಲಿ .......... ದೂರು ನೀಡಿದ ವಿಷಯ ಈಗ ನನಗೆ ಗೊತ್ತಾಯಿತು ಎಂದು ನುಡಿದಿರುತ್ತೀರಿ ಎಂದರೆ ಸರಿಯಲ್ಲ. ಸಾಕ್ಷಿ ತಮ್ಮ ಹೇಳಿಕೆಯನ್ನು ಅಲ್ಲಗಳೆದಿದ್ದರಿಂದ ಅದನ್ನು ನಿಪಿ 10 ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲು</u>** : ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎನ್ನುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ )

ಓ.ಹೇ.ಕೇ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾ.ದಂ., ಹಳಿಯಾಳ.